**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1074 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ ಅಬ್ದುಲ್ ಜಬ್ಬರ್ (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದವರು | ಅಬಕಾರಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | 12.03.2026. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ನಗರ/ಗ್ರಾಮೀಣ ಪ್ರದೇಶದಲ್ಲಿ ಅಬಕಾರಿ ಕಾನೂನು ಉಲ್ಲಂಘನೆ ಪ್ರಕರಣಗಳ ಸಂಖ್ಯೆ ಎಷ್ಟು: | ಕಳೆದ ಮೂರು ವರ್ಷಗಳಲ್ಲಿ (2023-24 ಮತ್ತು 2024-25 ಜುಲೈ ರಿಂದ ಜೂನ್ ವರೆಗೆ ಹಾಗೂ 2025-26 ಜುಲೈ ರಿಂದ ಫೆಬ್ರುವರಿ ಮಾಹೆವರೆಗೆ) ನಿಯಮಬಾಹಿರವಾಗಿ ಅಕ್ರಮ ಮದ್ಯ ಸಾಗಾಣಿಕೆ, ಹೊಂದುವಿಕೆ ಮತ್ತು ಮಾರಾಟ ಕೃತ್ಯದಲ್ಲಿ ತೊಡಗುವವರ ವಿರುದ್ಧ ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 32, 34 ರನ್ವಯ 10,221 ಜಾಮೀನಿಯವಲ್ಲದ (nonbailable) ಪ್ರಕರಣಗಳನ್ನು, ಸಾರ್ವಜನಿಕ ಸ್ಥಳದಲ್ಲಿ ಮದ್ಯ ಸೇವನೆಗೆ ಅವಕಾಶ ಕಲ್ಪಿಸಿಕೊಡುವವರ ವಿರುದ್ಧ ಕಲಂ-15 ಎ ರ ಉಲ್ಲಂಘನೆಗಾಗಿ ಜಾಮಿನೀಯ ದಂಡ ವಿಧಿಸಬಹುದಾದ (bailable and compoundable) ರ ಒಟ್ಟು 1,01,843 ಪ್ರಕರಣಗಳನ್ನು ಹಾಗೂ ಕಲಂ-36 ರನ್ವಯ ಪರವಾನಗಿ ಪಡೆದ ಮದ್ಯ ಮಾರಾಟ ಸನ್ನದುದಾರರು ಅವರ ಅಧಿಕೃತ ನೌಕರರು ವಿಧಿಸಲಾದ ಸನ್ನದು ಷರತ್ತುಗಳ ಉಲ್ಲಂಘನೆಗಾಗಿ ಒಟ್ಟು 10,652 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ. |
| (ಆ) | ಅಕ್ರಮ/ಕಳ್ಳಮದ್ಯ ಮಾರಾಟ ತಡೆಗಟ್ಟಲು ಸರ್ಕಾರ ತೆಗೆದುಕೊಂಡ ಕ್ರಮಗಳು ಯಾವುವು; (ಸಂಪೂರ್ಣ ವಿವರ ಒದಗಿಸುವುದು) | ಅಕ್ರಮವಾಗಿ ಮದ್ಯ ಮಾರಾಟ ಮಾಡುವುದನ್ನು ತಡೆಗಟ್ಟಲು ಇಲಾಖಾಧಿಕಾರಿಗಳು ವಲಯ ವ್ಯಾಪ್ತಿಯ ರೂಟ್‌ಗಳಲ್ಲಿ ನಿರಂತರವಾಗಿ ಗಸ್ತು ನಡೆಸಿ, ಸದರಿ ಗಸ್ತಿನ ಸಮಯದಲ್ಲಿ ಮತ್ತು ಸಾರ್ವಜನಿಕರಿಂದ ವಿಶೇಷವಾಗಿ ಮಹಿಳೆ/ಮಹಿಳಾ ಸಂಘಗಳಿಂದ ದೂರು ಸ್ವೀಕೃತವಾದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಸ್ಥಳಗಳ ಮೇಲೆ ದಾಳಿ ನಡೆಸಿ, ಅಕ್ರಮಗಳು ಕಂಡುಬಂದಲ್ಲಿ ಅಬಕಾರಿ ಕಾಯ್ದೆ ಮತ್ತು ನಿಯಮಗಳನುಸಾರ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ.<br><br>ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳಲ್ಲಿ ನಿಯಮಿತವಾಗಿ ರಸ್ತೆಗಾವಲು ನಡೆಸಿ ಸಂಶಯಾಸ್ಪದ ವಾಹನಗಳನ್ನು ತಪಾಸಣೆಗೆ ಒಳಪಡಿಸಲಾಗುತ್ತಿದೆ. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸ್ಥಾಯಿ ಸಮಿತಿ ಸಭೆಯನ್ನು ಏರ್ಪಡಿಸಿ ಇತರೆ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಅಕ್ರಮ ಹತ್ತಿಕ್ಕಲು ಕ್ರಮವಹಿಸುವ ಕುರಿತು ಪೊಲೀಸ್ ವರಿಷ್ಠಾಧಿಕಾರಿಗಳು ಮತ್ತು ಜಿಲ್ಲಾ ಅರಣ್ಯ ಸಂರಕ್ಷಣಾಧಿಕಾರಿಗಳೊಂದಿಗೆ |

| | | |
|---|---|---|
| | | ಜಂಟಿ ಕಾರ್ಯಚರಣೆ ನಡೆಸಲಾಗುತ್ತಿದೆ. ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 50 ರಂತೆ ಕಾರ್ಯವ್ಯಾಪ್ತಿಯಲ್ಲಿ ನಡೆಯುವ ಅಬಕಾರಿ ಅಕ್ರಮಗಳ ಕುರಿತು ಮಾಹಿತಿ ನೀಡಲು ತಿಳುವಳಿಕೆ ಪತ್ರ ಜಾರಿಗೊಳಿಸಲಾಗಿರುತ್ತದೆ. ಹಾಗೂ ಸಾರ್ವಜನಿಕರಿಗೆ ಗ್ರಾಮ ಸಭೆಗಳಲ್ಲಿ ಮತ್ತು ವಿದ್ಯಾರ್ಥಿಗಳಿಗೆ ಶಾಲಾ/ಕಾಲೇಜುಗಳಲ್ಲಿ ಮದ್ಯ ವ್ಯಸನ ಮತ್ತು ಮಾದಕ ವಸ್ತುಗಳ ಸೇವನೆಯಿಂದ ದೈಹಿಕ, ಮಾನಸಿಕ ಮತ್ತು ಸಾಮಾಜಿಕ ಆರೋಗ್ಯಕ್ಕೆ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. |
| (ಇ) | ಕಳ್ಳಮದ್ಯ ಪತ್ತೆ ಮಾಡಲು ಮತ್ತು ಮಾರಾಟ ತಡೆಯಲು ರಾಜ್ಯದಲ್ಲಿ ಎಷ್ಟು ದಾಳಿಗಳನ್ನು ನಡೆಸಲಾಗಿದೆ; | ಕಳೆದ ಮೂರು ವರ್ಷಗಳಲ್ಲಿ (2023-24 ಮತ್ತು 2024-25 ಜುಲೈ ರಿಂದ ಜೂನ್ ವರೆಗೆ ಹಾಗೂ 2025-26 ಜುಲೈ ರಿಂದ ಅಕ್ಟೋಬರ್ ಮಾಹೆವರೆಗೆ) ಅಬಕಾರಿ ಅಕ್ರಮಗಳನ್ನು ತಡೆಗಟ್ಟಲು ರಾಜ್ಯಾದ್ಯಂತ ಒಟ್ಟು 2,15,930 ದಾಳಿಗಳನ್ನು ನಡೆಸಲಾಗಿದೆ. |
| (ಈ) | ಲೈಸೆನ್ಸಿಂಗ್ ಪ್ರಕ್ರಿಯೆಯಲ್ಲಿ ಜನರಿಗೆ ಎದುರಾಗುವ ತೊಂದರೆಗಳ ಕುರಿತು ಸರ್ಕಾರ ಚಿಂತಿಸಿದೆಯೇ; (ಇದ್ದಲ್ಲಿ ಮಾಹಿತಿ ಒದಗಿಸುವುದು) | ಹೊಸ ಸನ್ನದುಗಳ ಮಂಜೂರಾತಿ ಮತ್ತು ಸನ್ನದು ನವೀಕರಣ ಪ್ರಕ್ರಿಯೆಗಳಲ್ಲಿ ಸಾರ್ವಜನಿಕರಿಗೆ/ಸನ್ನದುದಾರರಿಗೆ ಆಗುತ್ತಿರುವ ತೊಂದರೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.<br><br>• ಅಬಕಾರಿ ಸೇವೆಗಳನ್ನು 2019 ನೇ ಸಾಲಿನಿಂದ Version-1 ಆವೃತ್ತಿಯಲ್ಲಿ ಆನ್‌ಲೈನ್‌ಗೊಳಿಸಲಾಗಿರುತ್ತದೆ. ಈ ಆವೃತ್ತಿಯನ್ನು ಇನ್ನಷ್ಟು ಉನ್ನತೀಕರಣಗೊಳಸಲು ಹೊಸ ಆವೃತ್ತಿ Version-2 ತಂತ್ರಾಂಶವನ್ನು ಅಭಿವೃದ್ಧಿಪಡಿಸಿದ್ದು, ಪ್ರಸ್ತುತ ಆವೃತ್ತಿ Version-2 ರ ಮೂಲಕ ಅಬಕಾರಿ ಸೇವೆಗಳನ್ನು ಒದಗಿಸಲಾಗುತ್ತಿದೆ.<br>• ಸನ್ನದು ಮಂಜೂರಾತಿ ಸೇವೆಯನ್ನು ತ್ವರಿತವಾಗಿ ಸಾರ್ವಜನಿಕರಿಗೆ ಒದಗಿಸುವ ಉದ್ದೇಶದಿಂದ 16 ಹಂತಗಳಿಂದ 07 ಹಂತಗಳಿಗೆ ಕಡಿತಗೊಳಿಸಲಾಗಿರುತ್ತದೆ.<br>• ಹೊಂದಿಕೊಂಡಂತೆ ಆರ್.ವಿ.ಬಿ ಸನ್ನದುಗಳನ್ನು ಪಡೆಯಲು ಈ ಹಿಂದೆ ಇದ್ದಂತಹ ಹಂತಗಳನ್ನು ಕಡಿತಗೊಳಿಸಿ Auto Generated in Electronic Mode ಮೂಲಕ ಪಡೆಯಲು ಕರಡು ಅಧಿಸೂಚನೆ ಹೊರಡಿಸಲಾಗಿರುತ್ತದೆ.<br>• ಸನ್ನದು ಮಂಜೂರಾತಿ ಮತ್ತು ಸನ್ನದು ನವೀಕರಣ ಶುಲ್ಕಗಳನ್ನು ಆವೃತ್ತಿ Version-2 ತಂತ್ರಾಂಶದಲ್ಲಿ ಆನ್ ಲೈನ್ ಮೂಲಕ ಪಾವತಿಸಲು ಕ್ರಮ ಕೈಗೊಳ್ಳಲಾಗಿದೆ. |

| | | |
|---|---|---|
| | | • ಸನ್ನದು ನವೀಕರಣ ಸೇವೆಯನ್ನು ತ್ವರಿತವಾಗಿ ಸನ್ನದುದಾರರಿಗೆ ಒದಗಿಸುವ ಉದ್ದೇಶದಿಂದ ಸನ್ನದು ನವೀಕರಣವನ್ನು 02 ದಿನಗಳೊಳಗಾಗಿ ಅನುಮೋದಿಸಲಾಗುತ್ತಿದೆ.<br><br>ಸನ್ನದು ಅವಧಿಯನ್ನು ಪ್ರತಿ ವರ್ಷ ಅನ್ವಯವಾಗುವ ನವೀಕರಣ ಶುಲ್ಕಗಳನ್ನು ಪಾವತಿಸುವ ಷರತ್ತಿಗೊಳಪಟ್ಟು 01 ವರ್ಷದಿಂದ 05 ವರ್ಷಗಳಿಗೆ ವಿಸ್ತರಿಸಲಾಗಿರುತ್ತದೆ. |

**ಅಇ 43 ಇಎಲ್‌ಕ್ಯು 2026**

(ಆರ್.ಬಿ.ತಿಮ್ಮಾಪುರ)
ಅಬಕಾರಿ ಸಚಿವರು